ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1734 (1998)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಪಶುಸಂಗೋಪನೆ ಸಚಿವರು

ವಿಷಯ : ಗೋಹತ್ಯೆ ನಿಷೇಧ ಕಾಯ್ದೆಯಡಿ ಗಂಡು-ಕರುಗಳ ಬಗ್ಗೆ

(ಅ) ಗೋಹತ್ಯೆ ನಿಷೇಧ ಕಾಯ್ದೆ ಕಾನೂನು ಜಾರಿಗೆ ಬಂದ ನಂತರ ಹೈನುಗಾರಿಕೆಯಲ್ಲಿ ತೊಡಗಿರುವ ರೈತರು ಗಂಡು ಕರುಗಳನ್ನು ಹುಟ್ಟಿದ ತಕ್ಷಣ ತಾಯಿಯಿಂದ ಬೇರ್ಪಡಿಸಿ, ಗೋಶಾಲೆಗಳ ಮುಂದೆ ಮತ್ತು ಅರಣ್ಯಗಳಲ್ಲಿ ಬಿಟ್ಟು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕರುಗಳನ್ನು ನಿರ್ವಹಣೆ ಮಾಡಲು ರೈತರಿಗೆ ಪ್ರತಿದಿನ 150 ರಿಂದ 200 ರೂಪಾಯಿಗಳವರೆಗೆ ವೆಚ್ಚವಾಗುತ್ತಿದ್ದು, ರೈತರಿಗೆ ಸರ್ಕಾರದಿಂದ ಗಂಡು ಕರುಗಳ ನಿರ್ವಹಣೆಗೆ ಪ್ರೋತ್ಸಾಹ ಧನ ನೀಡಲಾಗುತ್ತಿದೆಯೇ;

(ಇ) ರಾಜ್ಯದಲ್ಲಿ ಗೋಹತ್ಯೆ ನಿಷೇಧ ಕಾಯ್ದೆ ಜಾರಿಗೆ ಬಂದ ನಂತರ ಎಷ್ಟು ಕರುಗಳನ್ನು ಗೋಶಾಲೆಗಳಿಗೆ ಬಿಡಲಾಗಿದೆ ; ಸರ್ಕಾರದಿಂದ ಎಷ್ಟು ಗೋಶಾಲೆಗಳನ್ನು ಕರುಗಳ ನಿರ್ವಹಣೆಗಾಗಿ ತೆರೆಯಲಾಗಿದೆ? (ಮಾಹಿತಿ ನೀಡುವುದು)